**ಕರ್ನಾಟಕ ಸರ್ಕಾರ**

ಸಂಖ್ಯೆ: SWD/SDC/243/2023

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:31-08-2023.

**ಸುತ್ತೋಲೆ**

ರಾಜ್ಯದಲ್ಲಿ ಮ್ಯಾನ್‌ಹೋಲ್/ಪಿಟ್‌ಗುಂಡಿ/ತೆರೆದ ಚರಂಡಿ/ಒಳಚರಂಡಿ/ ಸೆಪ್ಟಿಕ್ ಟ್ಯಾಂಕ್ ಮತ್ತು ಗಟಾರಗಳನ್ನು ಸುರಕ್ಷತಾ ಪರಿಕರಗಳಿಲ್ಲದೆ ಸ್ವಚತಾ ಕಾರ್ಯನಿರ್ವಹಿಸಿ ಎಂ.ಎಸ್.ಕಾಯ್ದೆ 2013ರ ಉಲ್ಲಂಘನೆಯಾಗಿರುವ ಪ್ರಕರಣಗಳು ಹೆಚ್ಚಾಗಿರುತ್ತದೆ. ಇಂತಹ ಪ್ರಕರಣಗಳಲ್ಲಿ ಘಟನೆ ನಡೆದ ದಿನವೇ ಕಾಯ್ದೆಯ ನಿಯಮಾನುಸಾರ ಪೊಲೀಸ್ ಠಾಣೆಗಳಲ್ಲಿ ದೂರನ್ನು ದಾಖಲಿಸಲು, ಸಂಬಂಧಪಟ್ಟ ಸ್ಥಳೀಯ ಪ್ರಾಧಿಕಾರಗಳಲ್ಲಿ ನೇಮಕವಾಗಿರುವ ಇನ್ಸ್‌ಪೆಕ್ಟರ್‌ಗಳ ಕರ್ತವ್ಯವಾಗಿರುತ್ತದೆ.

ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮ ಕಾಯ್ದೆ ಮತ್ತು ನಿಯಮ 2013ರ ಕಲಂ-20 ರ ಪ್ರಕಾರ ಸ್ಥಳೀಯ ಸಂಸ್ಥೆಗಳ ಇನ್ಸ್‌ಪೆಕ್ಟರ್ ಗಳ ಕರ್ತವ್ಯಗಳನ್ನು ವಿಸ್ತೃತವಾಗಿ ನಿಗಧಿ ಮಾಡಿ "In exercise of the power conferred under section 20 of the prohibition of employment as Manual Scavengers and their Rehabilitation Act, 2013, the Government of Karnataka hereby appoint the following officers/officials as Inspectors to exercise the power as conferred in the said Act under section 20(2), (3) and (4) of the Act within the local limit of their jurisdiction" ಅಧಿಕಾರವನ್ನು ನೀಡಿ ಅಧಿಸೂಚನೆ ಹೊರಡಿಸಲಾಗಿದೆ.

ಮ್ಯಾನ್‌ಹೋಲ್/ ಪಿಟ್‌ಗುಂಡಿ/ತೆರೆದಚರಂಡಿ/ಒಳಚರಂಡಿ/ಸೆಪ್ಟಿಕ್ ಟ್ಯಾಂಕ್ ಮತ್ತು ಗಟಾರಗಳನ್ನು ಸುರಕ್ಷತಾ ಪರಿಕರಗಳಿಲ್ಲದೆ ಸ್ವಚತಾ ಕಾರ್ಯನಿರ್ವಹಿಸುವ ಪ್ರಕರಣಗಳು ಹೆಚ್ಚಾಗಿದ್ದರೂ, ಈವರೆಗೂ ಜಿಲ್ಲೆಗಳಲ್ಲಿ ಎಂ.ಎಸ್.ಕಾಯ್ದೆ 2013 ರ ಅಡಿಯಲ್ಲಿ ನೇಮಕವಾಗಿರುವ ಇನ್ಸ್‌ಪೆಕ್ಟರ್‌ಗಳು ಪ್ರಕರಣಗಳನ್ನು ದಾಖಲು ಮಾಡಿ ಸಬ್ ಡಿವಿಷಜನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಕಳುಹಿಸಿ ಕ್ರಮವಹಿಸದೆ ಇರುವುದು ಮೇಲ್ವಿಚಾರಣೆ ಪ್ರಾಧಿಕಾರಿಗಳಾದ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರ ಗಮನಕ್ಕೆ ಬಂದಿರುತ್ತದೆ. ಇದರಿಂದಾಗಿ ಕಾಯ್ದೆ ಉಲ್ಲಂಘನೆಯಾಗಿರುವ ಪ್ರಕರಣಗಳು ಪ್ರಥಮ ವರ್ತಮಾನ ವರದಿ ದಾಖಲಾಗದೆ ಹಾಗೂ ದಾಖಲಾದ ಪ್ರಕಣಗಳು ಖುಲಾಸೆಯಾಗುತ್ತಿರುತ್ತವೆ. ನೋಡಲ್ ಅಧಿಕಾರಿಗಳಾದ ಸಮಾಜ ಕಲ್ಯಾಣ ಇಲಾಖೆಯ ಜಂಟಿ/ಉಪ ಅಥವಾ ಸಹಾಯಕ ನಿರ್ದೇಶಕರು, ಈ ಕುರಿತು ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳನ್ನು ದಾಖಲಿಸುತ್ತಿರುತ್ತಾರೆ.

ಎಂ.ಎಸ್.ಕಾಯ್ದೆ 2013 ರ ಸೆಕ್ಷನ್-20 ರ ಪ್ರಕಾರ ನೇಮಕಗೊಂಡಿರುವ ಇನ್ಸ್‌ಪೆಕ್ಟರ್ ಗಳು ಘಟನೆ ನಡೆದ ಕ್ಷಣವೇ ಪೊಲೀಸ್ ಠಾಣೆಗಳಲ್ಲಿ ಎಂ.ಎಸ್.ಕಾಯ್ದೆ 2013 ಸೆಕ್ಷನ್ 8 ಮತ್ತು

9 ಹಾಗೂ ಐಪಿಸಿ ಸೆಕ್ಷನ್-304ನ್ನು ನಮೂದಿಸಿ ಒಂದು ವೇಳೆ ಕಾರ್ಮಿಕರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿದ್ದಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ದೌರ್ಜನ್ಯ ತಡೆ ಕಾಯ್ದೆ-1989 ರ ಸೆಕ್ಷನ್-3(1)(J) ಅಡಿಯಲ್ಲಿ ಎಫ್.ಐ.ಆರ್‌ನ್ನು ದಾಖಲಿಸಿ ಸಬ್ ಡಿವಿಜನಲ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಸಲ್ಲಿಸುವವರೆಗೂ ಕ್ರಮವಹಿಸುವುದು. ಒಂದು ವೇಳೆ ಜಿಲ್ಲೆಗಳಲ್ಲಿ ನೇಮಕಗೊಂಡಿರುವ ಇನ್ಸ್‌ಪೆಕ್ಟರ್ ಕಾರ್ಯನಿರ್ವಹಿಸದೇ ಇದ್ದ ಪಕ್ಷದಲ್ಲಿ ನೋಡಲ್ ಅಧಿಕಾರಿಗಳಾದ ಸಮಾಜ ಕಲ್ಯಾಣ ಇಲಾಖೆಯ ಜಂಟಿ/ಉಪ ಅಥವಾ ಸಹಾಯಕ ನಿರ್ದೇಶಕರುರವರು ಕಾಯ್ದೆಯ ನಿಯಮಾನುಸಾರ ಇನ್ಸ್‌ಪೆಕ್ಟರ್‌ಗಳ ಮೇಲೆ ಎಫ್.ಐ.ಆರ್ ದಾಖಲಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S.V 31/08/2023
(ಕಲಾವತಿ ಎಸ್.ವಿ)
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಲೆಕ್ಕ ಪತ್ರ ಮತ್ತು ಲೆಕ್ಕ ಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, "ಅಡಿಟ್ ಭವನ", ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲೆಯ ಉಪವಿಭಾಗಾಧಿಕಾರಿಗಳು, ಕಂದಾಯ ಇಲಾಖೆ.
8. ಎಲ್ಲಾ ಜಿಲ್ಲೆಯ ಯೋಜನಾ ನಿರ್ದೇಶಕರು, ನಗರಾಭಿವೃದ್ಧಿ ಕೋಶ.
9. ಎಲ್ಲಾ ಜಿಲ್ಲೆಯ ತಹಶೀಲ್ದಾರರು.
10. ಎಲ್ಲಾ ಜಂಟಿ/ ಉಪ ನಿರ್ದೇಶಕರು/ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ.
11. ಆಯುಕ್ತರು/ಪೌರಾಯುಕ್ತರು/ಮುಖ್ಯಾಧಿಕಾರಿಗಳು, ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ.
12. ಎಲ್ಲಾ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಂದಾಯ ನಿರೀಕ್ಷಕರು.
13. ಎಲ್ಲಾ ಜಿಲ್ಲೆಯ, ಗ್ರಾಮ ಪಂಚಾಯಿತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.
14. ಎಲ್ಲಾ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆರೋಗ್ಯ ನಿರೀಕ್ಷಕರು.

15. ಸಂಬಂಧಪಟ್ಟ ಸದಸ್ಯರುಗಳಿಗೆ, (ಕ್ರ.ಸಂ:6 ರಿಂದ-11 ರವರೆಗೆ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು ಇವರ ಮುಖಾಂತರ)
16. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಮುಖ್ಯ ಮಂತ್ರಿಯವರ ಅಪರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

***